ವೃತ್ತಿ ಶಿಕ್ಷಣ ವಿದ್ಯಾರ್ಥಿಗಳಿಗೆ ಪ್ರತ್ಯೇಕ ಹಾಸ್ಟೆಲ್ ವ್ಯವಸ್ಥೆ

678 (887) ಶ್ರೀ ದಿನಕರ ಕೇಶವ ಶೆಟ್ಟಿ (ಕುಮಟ) : ಮಾನ್ಯ ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಮಟ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ವ್ಯಾಸಂಗ ಮಾಡುವ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ವೃತ್ತಿ ಶಿಕ್ಷಣ ಸಂಬಂಧಿತ ಪ್ರತ್ಯೇಕ ಹಾಸ್ಟೆಲ್ ವ್ಯವಸ್ಥೆಯನ್ನು ಸರ್ಕಾರವು ಕಲ್ಪಿಸಿದೆಯೇ;

ಆ) ಹಾಗಿಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು?

ಡಾ॥ ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು) :

ಅ) : ಇಲ್ಲ.

ಆ) ಕುಮಟ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ಕಾರಿ ಪಾಲಿಟೆಕ್ನಿಕ್‌ಗಳು ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಇಲ್ಲದಿರುವುದರಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ವೃತ್ತಿ ಶಿಕ್ಷಣ ಸಂಬಂಧಿತ ಪ್ರತ್ಯೇಕ ಹಾಸ್ಟೆಲ್ ವ್ಯವಸ್ಥೆಯನ್ನು ಕಲ್ಪಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಕುಮಟ ಮತಕ್ಷೇತ್ರದಲ್ಲಿ ಹೊಸ ಶಾಲಾ & ಪದವಿ ಪೂರ್ವ ಕಾಲೇಜುಗಳಿಗೆ ಕಟ್ಟಡ ನಿರ್ಮಾಣ

679 (888) ಶ್ರೀ ದಿನಕರ ಶೆಟ್ಟಿ(ಕುಮಟ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಮಟಾ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರಿ ಶಾಲಾ ಕಟ್ಟಡಗಳ ಸಂಖ್ಯೆ ಎಷ್ಟು; ಪದವಿ ಪೂರ್ವ ಕಾಲೇಜು ಕಟ್ಟಡಗಳೆಷ್ಟು; ಪದವಿ ಕಾಲೇಜುಗಳ ಕಟ್ಟಡಗಳೆಷ್ಟು;

ಆ) ಹೊಸದಾಗಿ ಪದವಿ ಪೂರ್ವ/ಪದವಿ ಕಾಲೇಜುಗಳ ಕಟ್ಟಡ ಗಳನ್ನು ಕಟ್ಟಲು ಸರ್ಕಾರವು ಕ್ರಮ ಕೈಗೊಂಡಿದೆಯೇ;

ಇ) ಹಾಗಿಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಕುಮಟಾ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಸರ್ಕಾರಿ ಶಾಲಾ ಕಾಲೇಜುಗಳ ಕಟ್ಟಡಗಳ ಸಂಖ್ಯೆ:

	ಪ್ರಾಥಮಿಕ	ಪ್ರೌಢ	ಪದವಿ ಪೂರ್ವ	ಪದವಿ
ಶಾಲಾ/ಕಾಲೇಜುಗಳ ಸಂಖ್ಯೆ	301	10	4	02
ಕಟ್ಟಡಗಳ ಸಂಖ್ಯೆ (ಕೊಠಡಿಗಳು)	1185	57	31	–

ಆ) ಕುಮಟಾ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಒಟು 4 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ನಬಾರ್ಡ್ ಅನುದಾನದ ಆರ್.ಐ.ಡಿ.ಎಫ್ ಕಾರ್ಯಕ್ರಮದ ವಿವಿಧ ಯೋಜನೆ ಅಡಿ ಒಟ್ಟು 31 ಕೊಠಡಿಗಳ ನಿರ್ಮಾಣ ಕಾರ್ಯವನ್ನು ಕೈಗೊಂಡಿದ್ದು ಅವುಗಳಲ್ಲಿ 19 ಕೊಠಡಿಗಳ ನಿರ್ಮಾಣ ಕಾರ್ಯವು ಪೂರ್ಣಗೊಂಡು ಕಾಲೇಜಿನ ಬಳಕೆಯಲ್ಲಿದೆ. ಅನುದಾನದ ಲಭ್ಯತೆಯನ್ನು ಆಧರಿಸಿ ಹಂತ ಹಂತವಾಗಿ ಕೊಠಡಿಗಳನ್ನು ಒದಗಿಸಲು ಕ್ರಮ ವಹಿಸಲಾಗುವುದು.

ಪದವಿ ಕಾಲೇಜಿಗೆ ಸಂಬಂಧಿಸಿದಂತೆ ನಿವೇಶನದ ಲಭ್ಯತೆಯಿಲ್ಲದಿರುವುದರಿಂದ ಕಟ್ಟಡಗಳನ್ನು ಕಟ್ಟಲಾಗಿರುವುದಿಲ್ಲ. ನಿವೇಶನ ದೊರೆತ ಕೂಡಲೇ ಕಟ್ಟಡ ನಿರ್ಮಿಸಲು ಕ್ರಮ ವಹಿಸಲಾಗುವುದು.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಹುನಗುಂದ ತಾಲ್ಲೂಕಿನ ಹೊಸ ಪದವಿ ಪೂರ್ವ ಕಾಲೇಜುಗಳಿಗೆ ಕಟ್ಟಡ

680 (1035) ಶ್ರೀ ದೊಡ್ಡನಗೌಡ ಗುಂಡನಗೌಡ ಪಾಟೀಲ್ (ಹುನಗುಂದ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?